Akashvani : Bangalore
Regional Bulletin In Kannada
13.10.2025 / 2.30 pm
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

13.10.2025 / 2.30 pm
<><*<><>*><>
ಮುಖ್ಯಾಂಶಗಳು :

೧. ಸಚಿವರಿಗೆ ಬೆಂಗಳೂರಿನಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಔತಣಕೂಟ

೨. ಸಾರ್ವಜನಿಕ ಸ್ಥಳಗಳು, ಸರ್ಕಾರಿ ಶಾಲೆಗಳಲ್ಲಿ ಆರ್ ಎಸ್ ಎಸ್ ಚಟುವಟಿಕೆ ನಿಷೇಧ ವಿಚಾರ - ಹೇಳಿಕೆ ಸಮರ್ಥಿಸಿಕೊಂಡ ಸಚಿವ ಪ್ರಿಯಾಂಕ್ ಖರ್ಗೆ

೩. ವಿಕಸಿತ ಭಾರತ ಬಿಲ್ಡಥಾನ್ ೨೦೨೫ ; ದೇಶಾದ್ಯಂತ ಎಲ್ಲಾ ಶಾಲೆಗಳಲ್ಲೂ ಆಯೋಜನೆ

೪. ಬೆಂಗಳೂರಿನ ಹೊರ ವರ್ತುಲ ರಸ್ತೆ ಸುಸ್ಥಿತಿಯಲ್ಲಿಡಲು ಜಿಬಿಎ ಆಯುಕ್ತ ಮಹೇಶ್ವರ್ ರಾವ್ ಸೂಚನೆ

೫. ಬಳ್ಳಾರಿ ರೈಲ್ವೇ ನಿಲ್ದಾಣದಲ್ಲಿ ಒಂದು ಜಿಲ್ಲೆ ಒಂದು ಉತ್ಪನ್ನ ಮಾರಾಟ ಮಳಿಗೆ ಲೋಕಾರ್ಪಣೆ

><><><><><

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ವಿವಾದದ ನಡುವೆಯೇ, ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬೆಂಗಳೂರಿನಲ್ಲಿ ಸಚಿವರಿಗೆ ಭೋಜನ ಕೂಟ ಆಯೋಜಿಸಿದ್ದಾರೆ. ಸಂಜೆ ೭ ಗಂಟೆಗೆ ಮುಖ್ಯಮಂತ್ರಿಗಳ ಅಧಿಕೃತ ನಿವಾಸ 'ಕಾವೇರಿ'ಯಲ್ಲಿ ಭೋಜನ ಕೂಟ ಆಯೋಜಿಸಲಾಗಿದೆ. ಎಲ್ಲಾ ಸಂಪುಟ ಸಹೋದ್ಯೋಗಿಗಳನ್ನು ಭೋಜನಕೂಟಕ್ಕೆ ಆಹ್ವಾನಿಸಿದ್ದಾರೆ. ಎಐಸಿಸಿ ರಾಷ್ಟ್ರೀಯ

ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರೊಂದಿಗೆ ಉಪಮುಖ್ಯಮಂತ್ರಿ ಭೋಜನ ಕೂಟದಲ್ಲಿ ಭಾಗವಹಿಸಲಿದ್ದಾರೆ ಎಂದು  ಐಎಎನ್ ಎಸ್ ಸುದ್ದಿ ಸಂಸ್ಥೆ ತಿಳಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಳೆದ ಎರಡೂವರೆ ವರ್ಷಗಳಲ್ಲಿ ಜಾರಿಗೆ ತಂದಿರುವ ಖಾತರಿ ಯೋಜನೆಗಳ ಯಶಸ್ಸಿನ ಬಗ್ಗೆ ಹಾಗೂ ಜಾತಿ ಜನಗಣತಿಯ ನಂತರ ಸರ್ಕಾರ ಎದುರಿಸಬೇಕಾದ ಸವಾಲುಗಳು, ವಿಶೇಷವಾಗಿ ಮೀಸಲಾತಿ ಮತ್ತು ಸಂಬಂಧಿತ ವಿಷಯಗಳಲ್ಲಿನ ಗಮನಾರ್ಹ ಬದಲಾವಣೆಗಳ ಬಗ್ಗೆ ಚರ್ಚಿಸುವ ಸಾಧ್ಯತೆಯಿದೆ.

><><><><

ಊಟಕ್ಕೆ ಸೇರುವುದೇ ದೊಡ್ಡ ಅಪರಾಧವೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ. ಹುಬ್ಬಳ್ಳಿಗೆ ತೆರಳುವ ಮುನ್ನ ಬೆಂಗಳೂರಿನಲ್ಲಿ ಕಿತ್ತೂರು ಉತ್ಸವದ ಜ್ಯೋತಿಗೆ ಚಾಲನೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಆಗಾಗ್ಗೆ ಊಟಕ್ಕೆ ಸೇರುತ್ತಿರುತ್ತೇವೆ ಎಂದು ಸ್ಪಷ್ಟಪಡಿಸಿದ್ದಾರೆ.

><><><><

ಆರ್‌ಎಸ್‌ಎಸ್ ನಿಷೇಧಿಸಬೇಕು ಎಂದು ಹೇಳಿಲ್ಲ, ಸರ್ಕಾರಿ ಶಾಲೆಗಳು, ಸಾರ್ವಜನಿಕ ಸ್ಥಳಗಳಲ್ಲಿ ಆರ್ ಎಸ್ ಎಸ್  ಚಟುವಟಿಕೆ ನಿಷೇಧಿಸುವಂತೆ ಹೇಳಿದ್ದು ಎಂದು ಐಟಿ ಬಿಟಿ, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು  ಆರ್‌ಎಸ್‌ಎಸ್  ಪ್ರೇರಿತ ಘರ್ಷಣೆಗಳ ಬಲಿಪಶುಗಳು ಹೆಚ್ಚಾಗಿ ಬಡ ಮತ್ತು ಹಿಂದುಳಿದ ವರ್ಗದ ಯುವಕರು, ಬಿಜೆಪಿ ನಾಯಕರ ಮಕ್ಕಳಲ್ಲ ಎಂದು ತಿಳಿಸಿದ್ದಾರೆ. ಆರ್‌ಎಸ್‌ಎಸ್ ಅನುಭವಿಸುತ್ತಿರುವ ಸವಲತ್ತುಗಳನ್ನು ಪ್ರಶ್ನಿಸಿದ ಅವರು, "ಇತರ ಸಂಘಟನೆಗಳು ಕೋಲುಗಳನ್ನು ಹಿಡಿದು ಮೆರವಣಿಗೆಗಳನ್ನು ನಡೆಸಿದರೆ, ಅವರಿಗೆ ಅವಕಾಶ ನೀಡಲಾಗುತ್ತದೆಯೇ? ಆರ್‌ಎಸ್‌ಎಸ್

ಅನ್ನು ಏಕೆ ವಿಭಿನ್ನವಾಗಿ ಪರಿಗಣಿಸಬೇಕು?. ಈ ವಿಶೇಷ ಸವಲತ್ತು ಅವರಿಗೆ ಯಾಕೆ ಎಂದು ಪ್ರಶ್ನಿಸಿದ್ದಾರೆ. ಇದೇ ವೇಳೆ ತಮ್ಮ ತಂದೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ೨೦೦೨ರಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು ಎಂಬ ಬಿಜೆಪಿ ಹೇಳಿಕೆಗೆ ಪ್ರತಿಕ್ರಿಯಿಸಿ ಗೃಹ ಸಚಿವರಾಗಿದ್ದಾಗ ಶಿವಾಜಿನಗರದಲ್ಲಿ ಸಮಸ್ಯೆ ಸೃಷ್ಟಿಸದಂತೆ ಎಚ್ಚರಿಸಲು ತೆರಳಿದ್ದರು ಎಂದು ಸ್ಪಷ್ಟಪಡಿಸಿದ್ದಾರೆ.

><><><><

ಹಸಿವು ಮುಕ್ತ ಕರ್ನಾಟಕ ನಿರ್ಮಾಣವೇ ಸರ್ಕಾರದ ಮುಖ್ಯ ಉದ್ದೇಶವಾಗಿರುವುದರಿಂದ ಅನ್ನಭಾಗ್ಯದ ಅಕ್ಕಿಯ ಜೊತೆಗೆ ಇಂದಿರಾ ಕಿಟ್ ವಿತರಿಸಲು ಸರ್ಕಾರ ಮಹತ್ವದ ನಿರ್ಧಾರ ತೆಗೆದುಕೊಂಡಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ಬಿಪಿಎಲ್ ಹಾಗೂ ಅಂತ್ಯೋದಯ ಪಡಿತರ ಚೀಟಿ ಹೊಂದಿರುವವರಿಗೆ ಇಂದಿರಾ ಕಿಟ್ ವಿತರಿಸಲಾಗುತ್ತಿದೆ. ಇನ್ನು ಮುಂದೆ ಅನ್ನಭಾಗ್ಯದ ೧೦ ಕೆಜಿಯ ಅಕ್ಕಿಯ ಬದಲು ೫ ಕೆಜಿ ಅಕ್ಕಿ ಹಾಗೂ ೧ ಕೆಜಿ ತೊಗರಿಬೇಳೆ, ೧ ಕೆಜಿ ಹೆಸರುಕಾಳು, ೧ ಲೀಟರ್ ಅಡುಗೆ ಎಣ್ಣೆ, ೧ ಕೆಜಿ ಸಕ್ಕರೆ ಹಾಗೂ ೧ ಕೆಜಿ ಉಪ್ಪು ಒಳಗೊಂಡ ಇಂದಿರಾ ಕಿಟ್ ವಿತರಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

><><><><

ಭಾರತದ ಅತಿದೊಡ್ಡ ಶಾಲಾ ಹ್ಯಾಕಥಾನ್ ಆದ 'ವಿಕಸಿತ ಭಾರತ ಬಿಲ್ಡಥಾನ್ ೨೦೨೫' ಇಂದು ದೇಶಾದ್ಯಂತ ನಡೆಯುತ್ತಿದೆ. ವಿಕಸಿತ ಭಾರತ್ ಬಿಲ್ಡಥಾನ್ ಒಂದು ರಾಷ್ಟ್ರವ್ಯಾಪಿ ಉಪಕ್ರಮವಾಗಿದ್ದು, ೬ ರಿಂದ ೧೨ನೇ ತರಗತಿಯ ವಿದ್ಯಾರ್ಥಿಗಳು ತಮ್ಮ ಸೃಜನಶೀಲತೆ,

ಸಮಸ್ಯೆ ಪರಿಹರಿಸುವ ಕೌಶಲ್ಯಗಳನ್ನು ಪ್ರದರ್ಶಿಸಲು ಮತ್ತು ಸಬಲೀಕರಣಗೊಳಿಸಲು ಶಾಲೆಗಳು ಮತ್ತು ಶಿಕ್ಷಕರನ್ನು ಆಹ್ವಾನಿಸುತ್ತದೆ. ಆತ್ಮನಿರ್ಭರ ಭಾರತ, ಸ್ವದೇಶಿ, ವೋಕಲ್ ಫಾರ್ ಲೋಕಲ್ ಮತ್ತು ಸಮೃದ್ಧ ಭಾರತ ಎಂಬ ನಾಲ್ಕು ವಿಷಯಗಳ ಮೇಲೆ ಮೂಲಮಾದರಿಗಳನ್ನು ರೂಪಿಸಲು ಅಥವಾ ನಿರ್ಮಿಸಲು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಮೂಲಕ ಶಾಲಾ ಮಟ್ಟದಲ್ಲಿ ನಾವೀನ್ಯತೆಯ ಸಂಸ್ಕೃತಿಯನ್ನು ಬಲಪಡಿಸುವ ಗುರಿಯನ್ನು ಈ ಕಾರ್ಯಕ್ರಮ ಹೊಂದಿದೆ. ಈ ಕಾರ್ಯಕ್ರಮವನ್ನು ಶಿಕ್ಷಣ ಸಚಿವಾಲಯವು ಅಟಲ್ ಇನ್ನೋವೇಶನ್ ಮಿಷನ್ - ಎಐಎಂ ಮತ್ತು ನೀತಿ ಆಯೋಗದ ಸಹಯೋಗದೊಂದಿಗೆ ಆಯೋಜಿಸಲಾಗಿದೆ.

><><><><><

ಹೆಬ್ಬಾಳ ಜಂಕ್ಷನ್‌ನಿಂದ  ನಾಯಂಡಹಳ್ಳಿ ಜಂಕ್ಷನ್‌ವರೆಗಿನ ಹೊರ ವರ್ತುಲ ರಸ್ತೆಯನ್ನು ಸುಸ್ಥಿತಿಯಲ್ಲಿಡಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್  ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನ ಹೊರ ವರ್ತುಲ ರಸ್ತೆ ಹಾಗೂ ಸರ್ವೀಸ್ ರಸ್ತೆಗಳನ್ನು ಪರಿಶೀಲಿಸುವ ಸಲುವಾಗಿ ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ  ಮಾತನಾಡಿದ ಅವರು, ಹೆಬ್ಬಾಳ ಜಂಕ್ಷನ್ ಕೆಳಭಾಗದಲ್ಲಿ ವೆಟ್ ಮಿಕ್ಸ್ ಹಾಕಲಾಗಿದ್ದು, ತಕ್ಷಣವೇ  ಡಾಂಬರೀಕರಣ ಮಾಡಬೇಕು ಎಂದು ಸೂಚಿಸಿದ್ದಾರೆ. ಭದ್ರಪ್ಪ ಲೇಔಟ್ ಮೇಲ್ಸೇತುವೆ ಬಳಿಯ ಸರ್ವಿಸ್ ರಸ್ತೆ ಹಾಳಾಗಿದ್ದು, ಕೆ-ರೈಡ್ ವತಿಯಿಂದ ಕಾಮಗಾರಿ ನಡೆಯುತ್ತಿರುವುದರಿಂದ, ಆ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಸರ್ವಿಸ್ ರಸ್ತೆಯ ದುರಸ್ಥಿಯನ್ನು ಶೀಘ್ರ ಪೂರ್ಣಗೊಳಿಸುವಂತೆ ತಿಳಿಸಿದ್ದಾರೆ. ಬಿಇಎಲ್ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದ್ದು, ಬಿಇಎಲ್ ಜಂಕ್ಷನ್‌ನಲ್ಲಿ ರಸ್ತೆ ಮೇಲ್ಮೈ ಹಾಳಾಗಿರುವುದನ್ನು ವೈಟ್ ಟಾಪಿಂಗ್ ಗುತ್ತಿಗೆದಾರರಿಂದಲೇ

ಮುಚ್ಚಿಸುವಂತೆ ಹಾಗೂ ಹೊರ ವರ್ತುಲ ರಸ್ತೆಯಲ್ಲಿರುವ ಎಲ್ಲಾ ಗುಂಡಿಗಳನ್ನು ತಕ್ಷಣ ಮುಚ್ಚಬೇಕು ಎಂದು ನಿರ್ದೇಶನ ನೀಡಿದ್ದಾರೆ.

><><><><

ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಬಳ್ಳಾರಿಯ ಕೇಂದ್ರ ರೈಲ್ವೇ ನಿಲ್ದಾಣದಲ್ಲಿ ಇಂದು ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಯೋಜನೆಯಡಿ ಒಂದು ಜಿಲ್ಲೆ ಒಂದು ಉತ್ಪನ್ನ ಮಾರಾಟ ಮಳಿಗೆಯನ್ನು ಬಳ್ಳಾರಿ ಸಂಸದ ಇ.ತುಕರಾಂ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಇದು ಸಹಕಾರಿಯಾಗಲಿದೆ. ಜನರು ವಿದೇಶಿ ಉತ್ಪನ್ನಗಳನ್ನು ಬಿಟ್ಟು ಸ್ವದೇಶಿ ಉತ್ಪನ್ನ ಖರೀದಿಸಬೇಕೆಂದು ಮನವಿ ಮಾಡಿದರು

ಧ್ವನಿ : ಇ.ತುಕರಾಂ (೩೫ ಸೆಕೆಂಟ್)

ಬಳ್ಳಾರಿ ಜಿಲ್ಲೆಯ ನೂರಾರು ಎಕರೆ ಪ್ರದೇಶದಲ್ಲಿ ಅಂಜೂರ ಬೆಳೆಯುತ್ತಿದ್ದು. ಇದನ್ನು ನೇರವಾಗಿ ಮತ್ತು ಸಂಸ್ಕರಿಸಿ ಇತರೇ ಜಿಲ್ಲೆ ಮತ್ತು ರಾಜ್ಯಗಳಿಗೆ ಮಾರಾಟ ಮಾಡಲಾಗುತ್ತಿದೆ. ಇದನ್ನು ಈ ಜಿಲ್ಲೆಯ ಉತ್ಪನ್ನ ಎಂದು ಪರಿಗಣಿಸಿದೆ. ಈ ಮಳಿಗೆಯ ನಿರ್ವಹಣೆಯನ್ನು ಸಹ ಸ್ವಸಹಾಯ ಸಂಘದ ಮಹಿಳೆಯರಿಗೆ ನೀಡಲಾಗಿದೆ.

><><><><

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಆಧುನಿಕ ತಾಂತ್ರಿಕತೆಗಳನ್ನು ಅಳವಡಿಸಿಕೊಂಡರೆ ದೇಶದ ಸುಸ್ಥಿರ ಅಭಿವೃದ್ಧಿಗೆ ಕೊಡುಗೆ ನೀಡಲು ಸಾಧ್ಯ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಎಂಎಸ್‌ಎಂಇಗಳ ಕಾರ್ಯಕ್ಷಮತೆ ಹೆಚ್ಚಿಸುವುದು ಹಾಗೂ ವೇಗಗೊಳಿಸುವ ಯೋಜನೆಯಡಿಯಲ್ಲಿ ರಫ್ತು ಕುರಿತ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು ಅಂತಾರಾಷ್ಟ್ರೀಯ ಮಟ್ಟದ

ಸ್ಪರ್ಧೆಗೆ ಇಳಿಯಬೇಕಾದರೆ ಕೈಗಾರಿಕೆಗಳು ಹೊಸ ತಾಂತ್ರಿಕತೆಗೆ ತಮ್ಮನ್ನು ತೆರೆದು ಕೊಳ್ಳಬೇಕಿರುವುದು ಅನಿವಾರ್ಯ ಎಂದರು ಹೇಳಿದ್ದಾರೆ.

ಧ್ವನಿ: ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ

><><><><><

ಕಲಬುರಗಿ ಸೇರಿದಂತೆ ಉತ್ತರ ಕರ್ನಾಟಕದ ರೈತರು ನೆರೆಯಿಂದ ಕಂಗಾಲಾಗಿದ್ದಾರೆ. ಆದರೆ ಸಚಿವ ಪ್ರಿಯಾಂಕ್ ಖರ್ಗೆ ಅವರು ತಮ್ಮ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಆರ್‌ಎಸ್‌ಎಸ್ ಬಗ್ಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಪತ್ರ ಬರೆದು ಕಾಲಹರಣ ಮಾಡುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ ಆರೋಪಿಸಿದ್ದಾರೆ.

><><>END<><><